(ವಿಧೇಯಕವನ್ನು ಮಂಡಿಸಲಾಯಿತು)

(ಅನುಬಂಧ–2)

3) ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ) ವಿಶೇಷ ಉಪಬಂಧಗಳು) ವಿಧೇಯಕ, 2014

ಶ್ರೀ ಆರ್.ವಿ. ದೇಶಪಾಂಡೆ (ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು):– ಮಾನ್ಯ ಅಧ್ಯಕ್ಷರೆ, 2014ನೇ ಸಾಲಿನ ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ) (ವಿಶೇಷ ಉಪಬಂಧಗಳು) ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು:– ಪ್ರಸ್ತಾವವನ್ನು ಮಂಡಿಸಲಾಯಿತು. ಈಗ ಪ್ರಸ್ತಾವವನ್ನು ಸಭೆಯ ಮತಕ್ಕೆ ಹಾಕುತ್ತೇನೆ. ಪ್ರಸ್ತಾವ ಹೀಗಿದೆ: "2014ನೇ ಸಾಲಿನ ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ) (ವಿಶೇಷ ಉಪಬಂಧಗಳು) ವಿಧೇಯಕವನ್ನು ಮಂಡಿಸಲು ಸಭೆಯ ಅನುಮತಿ ನೀಡಬೇಕು"

ಪ್ರಸ್ತಾವದ ಪರವಾಗಿರುವವರು 'ಹೌದು' ಎಂದು ಸೂಚಿಸಬೇಕು.

ಪ್ರಸ್ತಾವದ ವಿರೋಧವಾಗಿರುವವರು 'ಇಲ್ಲ' ಎಂದು ಸೂಚಿಸಬೇಕು.

ಪ್ರಸ್ತಾವವು 'ಹೌದು' ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ

ಪ್ರಸ್ತಾವವು 'ಹೌದು' ಎನ್ನುವವರ ಪರವಾಗಿದೆ

ಪ್ರಸ್ತಾವವು 'ಹೌದು' ಎನ್ನುವವರ ಪರವಾಗಿದೆ

ಪ್ರಸ್ತಾವವು ಅಂಗೀಕೃತವಾಗಿದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಂಡನೆಗೆ ಅನುಮತಿ ನೀಡಲಾಯಿತು.

ಅಧ್ಯಕ್ಷರು:– ಮಾನ್ಯ ಸಚಿವರು ಈಗ ವಿಧೇಯಕವನ್ನು ಮಂಡಿಸಬೇಕು.

ಶ್ರೀ ಆರ್.ವಿ. ದೇಶಪಾಂಡೆ (ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು):– ಮಾನ್ಯ ಅಧ್ಯಕ್ಷರೆ, 2014ನೇ ಸಾಲಿನ ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ) (ವಿಶೇಷ ಉಪಬಂಧಗಳು) ವಿಧೇಯಕವನ್ನು ಮಂಡಿಸುತ್ತೇನೆ.

ಅಧ್ಯಕ್ಷರು:– ವಿಧೇಯಕವನ್ನು ಮಂಡಿಸಲಾಗಿದೆ

(ವಿಧೇಯವನ್ನು ಮಂಡಿಸಲಾಗಿದೆ

(ಅನುಬಂಧ–3)

ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಮುಂದುವರಿದ ಚರ್ಚೆ.

ವಿಷಯ: ರಾಜ್ಯದಲ್ಲಿ ಇತ್ತೀಚಿನ ದಿನಗಳಲ್ಲಿ ಅತ್ಯಾಚಾರ ಮತ್ತು ಲೈಂಗಿಕ ದೌರ್ಜನ್ಯ ಪ್ರಕರಣಗಳು ಹೆಚ್ಚಾಗುತ್ತಿದ್ದು ಅದನ್ನು ತಡೆಯುವಲ್ಲಿ ರಾಜ್ಯಸರ್ಕಾರ ವಿಫಲವಾಗಿರುವ ಬಗ್ಗೆ.

ಶ್ರೀ ಜಗದೀಶ್ ಶೆಟ್ಟರ್:– ಸನ್ಮಾನ್ಯ ಅಧ್ಯಕ್ಷರೆ, ಬೆಂಗಳೂರಿನಲ್ಲಿ ಮತ್ತು ರಾಜ್ಯದಲ್ಲಿ ನಡೆಯುತ್ತಿರುವಂಥ ಘಟನೆಗಳಿಂದ ರಾಜ್ಯದಲ್ಲಿ ಕೇವಲ ಭಯಭೀತ ವಾತಾವರಣವಲ್ಲ, ಇಡೀ ರಾಷ್ಟ್ರದಲ್ಲಿ ಇದರ ಬಗ್ಗೆ ಚರ್ಚೆಯಾಗುತ್ತಿದೆ. ಬೆಂಗಳೂರಿಗೆ ಸುಂದರ ನಗರ, ಅತ್ಯಂತ ಶಾಂತಿಯುತವಾದ ನಗರ ಎನ್ನುವ ಹೆಗ್ಗಳಿಕೆ ಏನಿತ್ತು, ಅದಕ್ಕೆ ವ್ಯತಿರಿಕ್ತವಾಗಿ ಬೆಂಗಳೂರಿಗೆ ಕೆಟ್ಟ ಹೆಸರು ಬರುವಂಥ ಘಟನೆಗಳು ಇತ್ತೀಚೆಗೆ ನಡೆಯುತ್ತಿರುವುದನ್ನು ನೋಡುತ್ತಿದ್ದೇವೆ. ಬೆಂಗಳೂರಿನಲ್ಲಿ ಯಾವುದೇ ಘಟನೆ ನಡೆದಾಗ, ಅದು ಕಸದ ಸಮಸ್ಯೆ ಬಂದಾಗಲೂ ಅದು ಕೇವಲ ರಾಜ್ಯ ಮಟ್ಟದಲ್ಲಿ ಸುದ್ದಿಯಾಗುವುದಿಲ್ಲ, ಅಂತರರಾಷ್ಟ್ರೀಯ ಮಟ್ಟದಲ್ಲಿ ಸುದ್ದಿಯಾಗುತ್ತದೆ. ಅಂದರೆ ಬೆಂಗಳೂರು